**ಮೆಃ ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ನ್ಯಾಯಾಲಯ, ಮುಧೋಳ**

CC.No.809/2012
CW21/PW7

ದಿನಾಂಕಃ **04-09-2024** ರಂದು ಸಾಕ್ಷಿಯನ್ನು ಕರೆದು ಪ್ರಮಾಣ ವಚನ ಬೋದಿಸಲಾಯಿತು.

| | |
|---|---|
| ಹೆಸರು | ಹೋಳೆಪ್ಪಗೌಡ .ಪಾಟೀಲ |
| ಗಂಡನ ಹೆಸರು | ರಾಜೇಂದ್ರಗೌಡ |
| ವಯಸ್ಸು | 44 ವರ್ಷ |
| ಉದ್ಯೋಗ | ಸಿ.ಪಿ.ಐ ಬಾಗಲಕೋಟ ಗ್ರಾಮೀಣ ವೃತ್ತ |
| ವಾಸಸ್ಥಳ | ಬಾಗಲಕೋಟ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ ಃ**

ನಾನು ದಿನಾಂಕ 10.09.2008 ರಿಂದ 27.06.2011 ರವರೆಗೆ ನಾನು ಲೋಕಾಪುರ ಪೋಲಿಸ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕಾರ್ಯ ನಿರ್ವಹಿಸಿರುತ್ತೇನೆ.

ದಿನಾಂಕ 12.06.2012 ರಂದು ಚಾಸಾ-1 ರವರು ರಾತ್ರಿ 8-30 ಗಂಟೆಗೆ ಠಾಣೆಗೆ ಹಾಜರಾಗಿ ಒಂದು ಲಿಖಿತ ಪಿರ್ಯಾದಿ ನೀಡಿದ್ದು ಅದನ್ನು ಸ್ವೀಕರಿಸಿ ನಾನು ನಮ್ಮ ಠಾಣಾ ಗುನ್ನೆ ನಂ.107/2012 ನ್ನು ದಾಖಲಿಸಿಕೊಂಡು ಪ್ರ.ವ.ವ ವನ್ನು ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧೀಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಈ ಪ್ರಕರಣವು ಗಂಬೀರ ಪ್ರಕರಣವಾಗಿದ್ದರಿಂದ ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-22 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಯು ನಿಪಿ-11 ರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-11(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯಕ್ಕೆ ಪ್ರ ವ ವ ವನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-17 ಎಂದು ಗುರುತಿಸಿ ಅದರ ಮೇಲೆ ಇರುವ ಸಾಕ್ಷಿ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ನಂ.1 ರವರ ಪರ ಎಸ್.ಐ.ಜೆ ವಕೀಲರಿಂದಃ**

ದಿನಾಂಕ 12.06.2012 ರಂದು ಚಾಸಾ-1 ರವರು ರಾತ್ರಿ 8-30 ಗಂಟೆಗೆ ಠಾಣೆಗೆ ಹಾಜರಾಗಿ ನಿಪಿ-11 ರಂತೆ ಒಂದು ಲಿಖಿತ ಪಿರ್ಯಾದಿ ನೀಡಿದ್ದು ಅದನ್ನು ಸ್ವೀಕರಿಸಿ ನಾನು ನಮ್ಮ ಠಾಣಾ ಗುನ್ನೆ ನಂ.107/2012 ನ್ನು ದಾಖಲಿಸಿಕೊಂಡು ಪ್ರ.ವ.ವ ವನ್ನು ನಿಪಿ-17 ರಂತೆ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧೀಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ ಎಂದು ಮತ್ತು ಈ ಪ್ರಕರಣವು ಗಂಬೀರ ಪ್ರಕರಣವಾಗಿದ್ದರಿಂದ ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-22 ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಶ್ರೀ ಟಿ.ಆರ್.ಎಚ ಮತ್ತು ಎಚ.ಕೆ.ಬಿ ವಕೀಲರಿಂದ ಈ ಮೇಲಿನ ಪಾಟಿ ಸವಾಲನ್ನು ಅಳವಡಿಸಿಕೊಳ್ಳುತ್ತಾರೆ.

**ಮರು ವಿಚಾರಣೆ ಃ ಇಲ್ಲ.**
(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು )

ಓ ಹೇ ಕೇ ಸರಿ ಇದೆ.

Sd/-
ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆಎಂಎಫ್‌ಸಿ ಮುಧೋಳ.

ಸಾಕ್ಷಿಯ ಸಹಿ

LAGAMA SHIVANAPPA HUKKERI

Digitally signed by LAGAMA SHIVANAPPA HUKKERI
Date: 2025.04.28 14:04:02 +0530